ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಶಿವಮೊಗ್ಗ ತಾಲ್ಲೂಕು ಹೊಳಲೂರು-ಬೂದಿಗೆರೆ ಯೋಜನೆ ಸುಮಾರು 12 ವರ್ಷಗಳಾದರೂ ಪೂರ್ಣಗೊಳ್ಳದಿರುವ ಬಗ್ಗೆ

ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):-

495 (505) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2007 ರಲ್ಲಿ 6.25 ಕೋಟಿಗೆ ಮಂಜೂರಾಗಿದ್ದ ಶಿವಮೊಗ್ಗ ತಾಲ್ಲೂಕಿನ ಹೊಳಲೂರು-ಬೂದಿಗೆರೆ ಯೋಜನೆಯು 2019ರವರೆಗೆ 12.20 ಕೋಟಿ ಖರ್ಚಾಗಿದ್ದರೂ ಮುಕ್ತಾಯವಾಗದೆ ಪುನಃ 9 ಕೋಟಿಗೆ ಪ್ರಸ್ತಾವನೆ ಸಲ್ಲಿಸಿರುವುದು ನಿಜವೇ; ಹಾಗಿದ್ದಲ್ಲಿ, ಸುಮಾರು 12 ವರ್ಷಗಳಾದರೂ ಪೂರ್ಣಗೊಳ್ಳದಿರಲು ಕಾರಣವೇನು;

(ಆ) ಈ ಯೋಜನೆಯಲ್ಲಿ ಭ್ರಷ್ಟಾಚಾರ ನಡೆದಿರುವುದು ಹಾಗೂ ಆಡಿಟ್ ಮತ್ತು ತಪಾಸಣೆ ವರದಿಯಲ್ಲಿ ಗುರುತಿಸಲಾದ ಲೋಪದೋಷಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲಿ, ಕೈಗೊಂಡ ಕ್ರಮಗಳೇನು;

(ಇ) ನಕಲಿ ಬಿಲ್, ಕೊಟೇಷನ್‌ಗಳು, ಸುಳ್ಳು ರಿಪೇರಿ ಮೂಲಕ ಕೋಟ್ಯಾಂತರ ರೂಪಾಯಿ ಲೂಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ಈ ಯೋಜನೆಯನ್ನು ಶೀಘ್ರವಾಗಿ ಮುಕ್ತಾಯಗೊಳಿಸಿ ರೈತರಿಗೆ ನೀರು ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು?